ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಡಾ|| ವೈ.ಎ. ನಾರಾಯಣಸ್ವಾಮಿ ಇವರು ನಿಯಮ-72ರಡಿಯಲ್ಲಿ ನೀಡಿರುವ ಸೂಚನೆಗೆ ಹೇಳಿಕೆ

ಸೂಚನೆ

ಕರ್ನಾಟಕ ರಾಜ್ಯದಲ್ಲಿನ ಕೆಲವು ಹಿರಿಯ/ಕಿರಿಯ ಅಧಿಕಾರಿಗಳು ಮತ್ತು ನೌಕರರು ಭ್ರಷ್ಟಾಚಾರದಲ್ಲಿ ಭಾಗಿಯಾಗಿ ಎ.ಸಿ.ಬಿ., ಲೋಕಾಯುಕ್ತ ಹಾಗೂ ಇನ್ನಿತರ ತನಿಖಾ ಸಂಸ್ಥೆಗಳಿಂದ ತನಿಖೆಗೊಳಪಟ್ಟು ಅವರುಗಳ ಮೇಲೆ ಕ್ರಮ ಕೈಗೊಳ್ಳಲು ಸರ್ಕಾರದ ಅನುಮತಿ ಕೇಳಿದ್ದರೂ, ಸುಮಾರು ಪ್ರಕರಣಗಳಲ್ಲಿ ಅನುಮತಿ ನೀಡಲು DPAR ಇಲಾಖೆ ಮೀನಾಮೇಷ ಎಣಿಸುತ್ತಿರುವ ಹಾಗೂ ಇಂತಹ ಅಧಿಕಾರಿಗಳಿಗೆ ಪರೋಕ್ಷವಾಗಿ ಸಹಕರಿಸುತ್ತಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುತ್ತಿದ್ದೇನೆ.

****

ಹೇಳಿಕೆ

ಕರ್ನಾಟಕ ರಾಜ್ಯದಲ್ಲಿನ ಅಧಿಕಾರಿ ಮತ್ತು ನೌಕರರಿಗೆ ಸಂಬಂಧಿಸಿದಂತೆ ಎ.ಸಿ.ಬಿ., ಲೋಕಾಯುಕ್ತ, ಇನ್ನಿತರ ತನಿಖಾ ಸಂಸ್ಥೆಗಳಿಂದ ಸ್ವೀಕೃತವಾದ ಪ್ರಸ್ತಾವನೆಗಳ ಬಗ್ಗೆ ನಿಯಮಾನುಸಾರ ಪರಿಶೀಲಿಸಿ, ತನಿಖೆಗೆ ವಹಿಸಲು ಕ್ರಮವಹಿಸಲಾಗುತ್ತಿದೆ. ಪ್ರಕರಣಗಳಲ್ಲಿ ಮಾಡಿರುವ ಆರೋಪ/ಉಲ್ಲಂಘನೆಗಳ ಕುರಿತು ಸಂಬಂಧಪಟ್ಟ ಆಡಳಿತ ಇಲಾಖೆಗಳ ಅಭಿಪ್ರಾಯವನ್ನು ಪಡೆಯುವ ಅಗತ್ಯತೆ ಇರುತ್ತದೆ ಇಂತಹ ಪ್ರಕರಣಗಳಲ್ಲಿ ನಿಯಮಾನುಸಾರ ಅಗತ್ಯ ಕ್ರಮವಹಿಸಲಾಗುತ್ತಿದೆ.

ಭಾ.ಆ.ಸೇ ಅಧಿಕಾರಿಗಳ ವಿರುದ್ಧ ತನಿಖೆ ಕೈಗೊಳ್ಳುವ/ ಅಭಿಯೋಜನಾ ಮಂಜೂರಾತಿ ಪ್ರಕರಣಗಳಲ್ಲಿ ಕೇಂದ್ರ ಸರ್ಕಾರದ ಅನುಮತಿಯನ್ನು ಸಹ ಪಡೆಯಬೇಕಾಗಿರುತ್ತದೆ.

ಕೆ.ಎ.ಎಸ್ ವೃಂದದ ವಿವಿಧ ಶ್ರೇಣಿಯ ಅಧಿಕಾರಿಗಳು ವಿವಿಧ ಇಲಾಖೆಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಸಂಬಂಧಿಸಿದ ಇಲಾಖೆಗಳ ನಿಯಮ/ಸುತ್ತೋಲೆ ಉಲ್ಲಂಘಿಸಿರುವ ಬಗ್ಗೆ ಆಡಳಿತ ಇಲಾಖೆಗಳ ಅಭಿಪ್ರಾಯ ಪಡೆದು ಮುಂದುವರೆಯಬೇಕಾಗಿರುತ್ತದೆ.

ಕೆಲವೊಂದು ಪ್ರಕರಣಗಳಿಗೆ ಸಂಬಂಧಿಸಿದಂತೆ ನ್ಯಾಯಾಲಯಗಳಲ್ಲಿ ದಾವೆ ಸಲ್ಲಿಸಲಾಗಿದ್ದು, ಅಂತಿಮ ಆದೇಶದ ಮೇಲೆ ಮುಂದಿನ ಕ್ರಮ ತೆಗೆದುಕೊಳ್ಳಬೇಕಾಗಿರುವುದರಿಂದ ಪ್ರಕರಣಗಳು ಬಾಕಿ ಇರುತ್ತದೆ.

ಸಂಖ್ಯೆ:ಡಿಪಿಎಆರ್ 38 ಎಸ್ಎಂಎಸ್ 2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ



rated from eOffice by G JAGADEESHA, CMO-JS(GJ), JOINT SECRETARY, CMO on 21/03/2022 12:19 PM